ಸರಿಯಾಗಿರುತ್ತದೆ.

ಈ) ಉದ್ಭವಿಸುವುದಿಲ್ಲ.

ಸಿ.ಇ.ಟಿ. ಪಠ್ಯ ಕ್ರಮ

1438 (2061)

ಶ್ರೀ ರಾಮಲಿಂಗರೆಡ್ಡಿ (ಜಯನಗರ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಿಯೂನಿವರ್ಸಿಟಿ ತರಗತಿಗಳ ವಿಜ್ಞಾನ ವಿಭಾಗದಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಇರತಕ್ಕ ಪಠ್ಯಕ್ರಮವನ್ನು ಬೋಧಿಸಲಾಗುತ್ತಿದೆಯೆ?

ಆ) ಹಾಗಿಲ್ಲದಿದ್ದಲ್ಲಿ ಪ್ರಿಯೂನಿವರ್ಸಿಟಿ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳು ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗಲು ಖಾಸಗೀ ಪಾಠಗಳಿಗೆ ಹೋಗಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದ ನಿಲುವೇನು?

ಇ) ಪ್ರಿಯೂನಿವರ್ಸಿಟಿ ವಿಜ್ಞಾನ ತರಗತಿಗಳಲ್ಲಿ ಕಡ್ಡಾಯವಾಗಿ ಸಾಮಾನ್ಯ ಪ್ರವೇಶ ಪರೀಕ್ಷೆ ಪಠ್ಯಕ್ರಮವನ್ನು ಬೋಧಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?

ಶ್ರೀ ಹೆಚ್.ಜಿ.ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):

ಅ) ಹೌದು, ಸಾಮಾನ್ಯ ಪ್ರವೇಶ ಪರೀಕ್ಷೆಯ ಪಠ್ಯ ಕ್ರಮ ಬೇರೆ ಇಲ್ಲ ಪ್ರಿಯೂನಿವರ್ಸಿಟಿ ವಿಜ್ಞಾನ ತರಗತಿಗಳಿಗೆ ಇಟ್ಟಿರುವ ಪಠ್ಯ ಕ್ರಮದಿಂದಲೇ ಪರೀಕ್ಷೆಗೆ ಪ್ರಶ್ನೆಗಳನ್ನು ನೀಡಲಾಗುತ್ತದೆ. ಸಾಮಾನ್ಯ ತರಗತಿಗಳಲ್ಲಿ ಈ ಪಠ್ಯಕ್ರಮ ಬೋಧಿಸಲಾಗುತ್ತಿದೆ.

ಆ) ಪ್ರಿಯೂನಿವರ್ಸಿಟಿ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳು ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗಲು ಖಾಸಗಿ ಪಾಠಗಳಿಗೆ ಹೋಗಬೇಕಾದ ಅಗತ್ಯವಿರುವುದಿಲ್ಲ.

ಇ) ಈ ಮೇಲೆ (ಅ)ಕ್ಕೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸವುದಿಲ್ಲ.

ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳಿಗೆ ಕ್ಯಾಲ್ಕುಕುಲೇಟರ್ ನಿಷೇಧ.